# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆ ಸಂಖ್ಯೆ: ನಿಅಚೌಅನಿ/2022-23ನೇ ಕ್ರಿಯಾಯೋಜನೆ/ಸಿಆರ್-01/2022-23, ದಿನಾಂಕ:31.03.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿ., ಇವರು ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಕಾರ್ಯಕ್ರಮಗಳಿಗೆ 2022-23ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ:2225-03-190-0-07 ರಡಿಯಲ್ಲಿ ರೂ.1100.00ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ. 2022-23ನೇ ಸಾಲಿನಲ್ಲಿ ನಿಗಮವು ಕ್ರಿಯಾಯೋಜನೆಯನ್ನು ರೂಪಿಸಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದ್ದು, ಸದರಿ ವಿಷಯವನ್ನು ದಿನಾಂಕ:29.03.2022 ರಂದು ಜರುಗಿದ 14ನೇ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗಿದ್ದು, ಅದರಂತೆ ಕ್ರಿಯಾಯೋಜನೆಗೆ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ.ಸಂ | ಯೋಜನೆ ಹೆಸರು | ಭೌತಿಕ ಗುರಿ | ಆರ್ಥಿಕ ಗುರಿ(ರೂ.ಲಕ್ಷಗಳಲ್ಲಿ) |
|---|---|---|---|
| 1 | ಗಂಗಾ ಕಲ್ಯಾಣ ಯೋಜನೆ | 174 | 400.00 |
| 2 | 2021-22ನೇ ಸಾಲಿನ ಗಂಗಾ ಕಲ್ಯಾಣ ನೀರಾವರಿ ಯೋಜನೆ(ಭೌತಿಕ 32) | - | 80.00 |
| 3 | ಸ್ವಯಂ ಉದ್ಯೋಗ ಸಾಲ ಮತ್ತು ಸಹಾಯಧನ ಯೋಜನೆ | 600 | 300.00 |
| 4 | ಅರಿವು ಶೈಕ್ಷಣಿಕ ಸಾಲ ಯೋಜನೆ | 76 | 50.00 |
| 5 | ಬ್ಯಾಂಕ್ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ (ಚೈತನ್ಯ ಸಬ್ಸಿಡಿ ಕಂ ಸಾಫ್ಟ ಲೋನ್) | 200 | 50.00 |
| 6 | ಅಮೃತ ಯೋಜನೆ(ಅಮೃತ ಮುನ್ನಡೆ) | - | 100.00 |
| 7 | ಆಡಳಿತಾತ್ಮಕ ವೆಚ್ಚ | - | 120.00 |
| | ಒಟ್ಟು | 1050 | 1100.00 |

27/4/22

..2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 307 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ: 27.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಈ ಕೆಳಕಂಡ ಕಾರ್ಯಕ್ರಮಗಳನ್ನು 2022-23ನೇ ಸಾಲಿನಲ್ಲಿ ಮುಂದುವರೆಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ.

| ಕ್ರ.ಸಂ | ಯೋಜನೆ ಹೆಸರು |
|---|---|
| 1 | ಗಂಗಾ ಕಲ್ಯಾಣ ನೀರಾವರಿ ಯೋಜನೆ |
| 2 | ಸ್ವಯಂ ಉದ್ಯೋಗ ಸಾಲ ಮತ್ತು ಸಹಾಯಧನ ಯೋಜನೆ |
| 3 | ಅರಿವು ಶೈಕ್ಷಣಿಕ ಸಾಲ ಯೋಜನೆ |
| 4 | ಬ್ಯಾಂಕ್ ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ(ಚೈತನ್ಯ ಸಬ್ಸಿಡಿ ಕಂ ಸಾಫ್ಟ್ ಸಾಲ ಯೋಜನೆ) |
| 5 | ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ |

ಷರತ್ತುಗಳು:-

1. ಸರ್ಕಾರದ ಸುವಿಧಾ ಪೋರ್ಟಲ್‌ನಲ್ಲಿ ಈಗಾಗಲೇ ಅಳವಡಿಸಿರುವ ಯೋಜನೆಗಳಿಗೆ ಆನ್‌ಲೈನ್ ವಿಧಾನದಲ್ಲಿ ಅರ್ಜಿಗಳನ್ನು ಪಡೆಯತಕ್ಕದ್ದು, ಅರ್ಜಿಗಳನ್ನು ಅಹ್ವಾನಿಸಲು ನಿಗಮವು ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಕನಿಷ್ಟ 30 ದಿನಗಳ ಕಾಲಾವಕಾಶ ನೀಡುವುದು.
2. ಸದರಿ ಯೋಜನೆಗಳನ್ನು ಸೆಕ್ಷನ್ 07 ಆಧಾರ್ ಕಾಯ್ದೆ ಅಡಿಯಲ್ಲಿ ಅದಿಸೋಚನೆ ಆಗದ್ದಿದ್ದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮವು ಕೂಡಲೇ ಸೂಕ್ತ ಪ್ರಸ್ತಾವನೆ ಸಲ್ಲಿಸುವುದು. ಸಕ್ಷಮ ಪ್ರಾಧಿಕಾರದಿಂದ ಸೆಕ್ಷನ್ 07 ಆಧಾರ್ ಕಾಯ್ದೆ ಅಡಿಯಲ್ಲಿ ಅಧಿಸೂಚನೆ ಹೊರಡಿಸಿದ ನಂತರ ನಿಯಮಾನುಸಾರ ಕಡ್ಡಾಯವಾಗಿ ಫಲಾನುಭವಿಯ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಅನುದಾನ ಸಂಧಾಯವಾಗಬೇಕು.
3. ಸದರಿ ಯೋಜನೆಗಳ ಮಾರ್ಗಸೂಚಿಯಲ್ಲಿ ಸರ್ಕಾರವು ಏನೇ ಬದಲಾವಣೆ ಮಾಡಿದ್ದಲ್ಲಿ ಆ ದಿನದಿಂದಲೇ ಬದಲಾವಣೆ ಆಗುವ ಮಾರ್ಗಸೂಚಿಗಳ ಅನುಸಾರ ಯೋಜನೆಗಳನ್ನು ಅನುಷ್ಠಾನ ಮಾಡುವುದು.
4. ನಿಗಮದ ಹಂತದಲ್ಲಿ ಯಾವುದೇ ಯೋಜನೆಯನ್ನು ಬದಲಾವಣೆ ಮಾಡಬೇಕಾದಲ್ಲಿ ಸರ್ಕಾರದ ಪೂರ್ವಾನುಮೋದನೆ ಕಡ್ಡಾಯವಾಗಿ ಪಡೆಯತಕ್ಕದ್ದು.

27/4/22